# ಸಿವಿಲ್ ಮತ್ತು ಜೆಎಮ್ಎಫ್ ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

## ಸಿ.ಸಿ ನಂಃ **824 / 2018**

| | | |
|---|---|---|
| ಸಾಕ್ಷಿಯ ಹೆಸರಃ | ಶ್ರೀ ಸಿದ್ರಾಮಪ್ಪ ತಾಳಿಕೋಟೆ | ಫ್ರಾಸಾಃ **05** |
| ತಂದೆ ಹೆಸರುಃ | ಶ್ರೀಶೈಲ | ಚಾಸಾಃ **07** |
| ವಯಸ್ಸುಃ | **38** ವರ್ಷ | ದಿಃ **29.01.2025** |
| ಉದ್ಯೋಗಃ | ಅಬಕಾರಿ ನಿರೀಕ್ಷಕರು | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಕಲಬುರಗಿ | |

ಮುಖ್ಯ ವಿಚಾರಣೆಃ ಮಾನ್ಯ ಹಿ.ಸ.ಸ.ಅ.ರಿಂದಃ

ನಾನು ಫೆಬ್ರವರಿ 2018 ರಿಂದ ಅಕ್ಟೋಬರ್ 2018 ವರೆಗೆ ಯಾದಗಿರಿ ಅಬಕಾರಿ ಉಪ ಆಯುಕ್ತರ ಕಚೇರಿಯಲ್ಲಿ ಅಬಕಾರಿ ಉಪ-ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 18.05.2018 ರಂದು ಈ ಪ್ರಕರಣದ ಕಡತವನ್ನು ಚಾಸಾಃ 6 ರವರಿಂದ ಪಡೆದುಕೊಂಡು ಪರಿಶೀಲಿಸಿ ಅದೇ ದಿನ ವಾಹನದ ಮಾಲಿಕತ್ವದ ಮಾಹಿತಿ ನೀಡುವಂತೆ ಫ್ರಾದೇಶಿಕ ಸಾರಿಗೆ ಕಚೇರಿಗೆ ಪತ್ರದ ಮೂಲಕ ನಿವೇದಿಸಿಕೊಂಡಿದ್ದೆನು. ನಂತರ ವಾಹನದ B extract ಪ್ರತಿಯನುನ್ನು ಪಡೆದು ಪರಿಶೀಲಿಸಲಾಗಿ ವಾಹನ 2 ನೇ ಆರೋಪಿ ಲಕ್ಷ್ಮಣ ರವರ ಹೆಸರಿನಲ್ಲಿ ಇರುವುದಾಗಿ ಕಂಡುಬಂದಿರುತ್ತದೆ. ನಂತರ 26.07.2018 ರಂದು ಆರೋಪಿತರ ವಿರುದ್ಧ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

B extract ನ್ನು ನಿಪಿ-2 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಎಂ.ಬಿ.ಪಿ ವಕೀಲರಿಂದಃ

ನಾನು ಈ ಪ್ರಕರಣದಲ್ಲಿ ವಾಹನದ ಮಾಲಿಕತ್ವದ ಮಾಹಿತಿ ಮಾತ್ರ ಪಡೆದುಕೊಂಡಿದ್ದೇನೆ, ಬೇರೆ ಯಾವುದೇ ತನಿಖೆ ಮಾಡಿಲ್ಲ ಎಂದರೆ ಸರಿ. 1 ನೇ ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ಆತನ ವಿರುದ್ಧ ಸುಳ್ಳು ಅಂತಿಮ ವರದಿ ಸಲ್ಲಿಸಿದ್ದೇನೆಂದರೆ ಸರಿಯಲ್ಲ.

ಮರುವಿಚಾರಣೆ ಃ ಇಲ್ಲ

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.